ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ಸೋಮವಾರ, ದಿನಾಂಕ: 16ನೇ ಮಾರ್ಚ್, 2020

ಜೇಷ್ಠತಾ ಪಟ್ಟಿ ಪ್ರಕಟಿಸಿ ಮುಂಬಡ್ತಿ ನೀಡುವ ಕುರಿತು

ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

984 (1030) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದ್ವಿತೀಯ ದರ್ಜೆ ಸಹಾಯಕರ ವೃಂದದಿಂದ ಪ್ರಥಮ ದರ್ಜೆ ಸಹಾಯಕರ ವೃಂದಕ್ಕೆ ಮುದ್ರಣ, ಲೇಖನ ಸಾಮಗ್ರಿ ಇಲಾಖೆಯಲ್ಲಿ ಕಳೆದ 10 ವರ್ಷಗಳಿಂದ ಜೇಷ್ಠತಾ ಪಟ್ಟಿ ತಯಾರಿಸಲಾಗಿದೆಯೇ; ಜೇಷ್ಠತಾ ಪಟ್ಟಿ ತಯಾರಿಸಿದ್ದಲ್ಲಿ ಸಂಪೂರ್ಣ ವಿವರಗಳ ಮಾಹಿತಿ ನೀಡುವುದು ;

(ಆ) ಸದರಿ ಇಲಾಖೆಯಲ್ಲಿ ಪ್ರಸ್ತುತ ಇರುವ ಗ್ರೂಪ್ ಎ.ಬಿ.ಸಿ.ಡಿ ಹುದ್ದೆಗಳ ಮತ್ತು ಖಾಲಿ ಇರುವ ಹುದ್ದೆಗಳ ವಿವರಗಳ (ಜಿಲ್ಲಾವಾರು) ಮಾಹಿತಿ ನೀಡುವುದು ;

(ಇ) ಸದರಿ ಇಲಾಖೆಯಲ್ಲಿ ಗ್ರೂಪ್ ಎ.ಬಿ.ಸಿ.ಡಿ ಹುದ್ದೆಗಳಿಗೆ ಕಳೆದ 10 ವರ್ಷಗಳಿಂದ ಮುಂಬಡ್ತಿ ನೀಡಲಾಗಿದೆಯೇ; ಮುಂಬಡ್ತಿ ನೀಡಿದ್ದಲ್ಲಿ ಯಾವ ಯಾವ ಹುದ್ದೆಗಳಿಗೆ ನೀಡಲಾಗಿದೆ ; (ಸಂಪೂರ್ಣ ವಿವರಗಳ ಮಾಹಿತಿ ನೀಡುವುದು)

(ಈ) ಇಲಾಖೆಗಳಲ್ಲಿ ಗ್ರೂಪ್ "ಸಿ" ಹುದ್ದೆಗಳಲ್ಲಿ ಮುಂಬಡ್ತಿ ನೀಡಲು ಇರುವ ತೊಂದರೆಗಳೇನು ಹಾಗೂ ಗ್ರೂಪ್ "ಎ.ಬಿ.ಸಿ." ನೌಕರರ ಜೇಷ್ಠತಾ ಪಟ್ಟಿಯನ್ನು ಪ್ರತಿ ವರ್ಷ ಪ್ರಕಟಿಸಲಾಗಿದೆಯೇ ; ವರ್ಷವಾರು ಸಂಪೂರ್ಣ ವಿವರ ನೀಡುವುದು ; ಸದರಿ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ವಿಳಂಬ ಮಾಡುತ್ತಿರುವುದಕ್ಕೆ ಕಾರಣಗಳೇನು ;

(ಉ) ಅಂತರ್ಜಾಲದಲ್ಲಿ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ಸರ್ಕಾರಕ್ಕಿರುವ ಅಡಚಣೆಗಳೇನು ?